# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಎಂ.ಮಲ್ಲೇಶಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲೂಕು ಪಂಚಾಯತ್, ಚಿತ್ರದುರ್ಗ, ಮತು ಶ್ರೀ ಹೆಚ್. ಶ್ರೀನಿವಾಸ್, ಕಾರ್ಯದರ್ಶಿ, ಗ್ರಾಮ ಪಂಚಾಯತ್, ಇಂಗಳದಾಳ, ಚಿತ್ರದುರ್ಗ ತಾಲ್ಲೂಕು ಇವರುಗಳ ವಿರುದ್ಧ ದುರ್ನಡತೆ ಕುರಿತು ಜಂಟಿ ಇಲಾಖಾ ವಿಚಾರಣೆ ಜರುಗಿಸಲು ಕರ್ನಾಟಕ ಉಪ ಲೋಕಾಯುಕ್ತ ರವರಿಗೆ ವಹಿಸುವ ಬಗ್ಗೆ.

ಓದಲಾಗಿದೆ: ಅಪರ ನಿಬಂಧಕರು, ವಿಚಾರಣೆಗಳು-8, ಕರ್ನಾಟಕ ಲೋಕಾಯುಕ, ಬೆಂಗಳೂರು ಇವರ ಅ.ಸ. ಪತ್ರ ಸಂಖ್ಯೆ: ಕಂಪ್ಲೇಂಟ್/ಉಪಲೋಕ್/ ಬಿಡಿ-1877/2012/ಎಆರ್‌ಇ- II ದಿನಾಂಕ: 26-11-2012.

------

ಪ್ರಸ್ತಾವನೆ:

ಶ್ರೀ ಕೆ. ಮಂಜಣ್ಣ ಬಿನ್ ಕಂಪಾಳಪ್ಪ, ಸಣ್ಣ ಪ್ರಮಾಣದ ಗುತ್ತಿಗೆದಾರರು, ಇಂಗಳದಾಳ ಗ್ರಾಮ ಚಿತ್ರದುರ್ಗ ತಾಲ್ಲೂಕು ಇವರು ಇಂಗಳದಾಳ ಗ್ರಾಮ ಪಂಚಾಯತಿ ವ್ಯಾಪ್ತಿಯ ಇಂಗಳದಾಳ ಗ್ರಾಮದಲ್ಲಿ ರುದ್ರಸ್ವಾಮಿ ಗುಡಿಯಿಂದ ಕುರುಮರಡಿ ಕೆರೆವರೆಗಿನ, ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಮಾಡಿಸಿದ್ದು, ಸದರಿ ಕಾಮಗಾರಿಗೆ ಬೇಕಾದ ಸಾಮಗ್ರಿಯನ್ನು ಪೂರೈಸಲು ಶ್ರೀ ಮಂಜುನಾಥ್ ಎಂಬುವರಿಗೆ ದೂರುದಾರರು ಪವರ್ ಆಫ್ ಅಟಾರ್ನಿ ನೀಡಿರುತ್ತಾರೆ. ಅದರನ್ವಯ ಸದರಿ ಕಾಮಗಾರಿಗೆ ಬೇಕಾದ ಸಾಮಗ್ರಿಗಳನ್ನು ಪೂರೈಸುವಂತೆ ತಿಳಿಸಿರುತ್ತಾರೆ. ಆ ಪ್ರಕಾರ ಸದರಿ ಕಾಮಗಾರಿಗೆ ರೂ. 3.00 ಲಕ್ಷಗಳ ಸಾಮಗ್ರಿಗಳನ್ನು ಪೂರೈಕೆ ಮಾಡಿದ್ದು, ಗ್ರಾಮ ಪಂಚಾಯತಿಯಿಂದ ಬಿಲ್ಲು ತಯಾರಿಸಿ ನೀಡಿದ್ದು, ಈ ಬಿಲ್ಲಿಗೆ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಚಿತ್ರದುರ್ಗ ಇವರ ಮೇಲುಸಹಿ ಮಾಡಬೇಕಾಗಿರುತ್ತದೆ. ಈ ವಿಷಯವಾಗಿ ಸದರಿ ಅಧಿಕಾರಿಯನ್ನು ದೂರುದಾರರು ಭೇಟಿ ಮಾಡಿದಾಗ ಅವರು ಶೇಕಡಾ 4 ರಂತೆ ರೂ. 12,000/- ಗಳ ಲಂಚ ಕೊಡಬೇಕೆಂದು ಒತ್ತಾಯಿಸಿದ್ದು, ಈ ಬಗ್ಗೆ ಶ್ರೀ ಕೆ. ಮಂಜಣ್ಣ ಬಿನ್ ಕಂಪಾಳಪ್ಪ, ಇಂಗಳದಾಳ ಗ್ರಾಮ ಇವರು ದಿನಾಂಕ:17-03-2011 ರಂದು ಲೋಕಾಯುಕ್ತ ಕಛೇರಿಯಲ್ಲಿ ದೂರನ್ನು ದಾಖಲಿಸಿರುತ್ತಾರೆ. ಸದರಿ ದೂರನ್ನು ಆಧರಿಸಿ ಪೋಲೀಸ ನಿರೀಕ್ಷಕರು, ಕರ್ನಾಟಕ ಲೋಕಾಯುಕ್ತ ಚಿತ್ರದುರ್ಗ ಇವರು ತನಿಖೆಯನ್ನು ಕೈಗೊಂಡು ಸದರಿ ಅಧಿಕಾರಿ ರೂ. 12,000/-ಗಳ ಹಣವನ್ನು ಮತ್ತೊಬ್ಬ ಆರೋಪಿ ಶ್ರೀ ಹೆಚ್. ಶ್ರೀನಿವಾಸ್, ಗ್ರಾಮ ಪಂಚಾಯತಿ ಕಾರ್ಯದರ್ಶಿ, ಇಂಗಳದಾಳ ಗ್ರಾಮ ಪಂಚಾಯತಿ ಇವರ ಮುಖಾಂತರ ಫಿರ್ಯಾದುದಾರರಿಂದ ಸ್ವೀಕರಿಸುತ್ತಿದ್ದಾಗ ಲೋಕಾಯುಕ್ತ ಪೋಲೀಸರ ಬಲೆಗೆ ದಿ:19-03-2011 ರಂದು ಸಿಕ್ಕಿ ಬಿದ್ದಿರುತ್ತಾರೆ. ಆದ್ದರಿಂದ ಈ ಕೆಳಕಂಡ ಅಧಿಕಾರಿ/ ನೌಕರರುಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಜಂಟಿ ಇಲಾಖಾ ವಿಚಾರಣೆಗೆ ಆದೇಶಿಸಲು ಉಪ ಲೋಕಾಯುಕ್ತ ರವರು ಶಿಫಾರಸ್ಸು ಮಾಡಿರುವುದಾಗಿ,ಅಪರ ನಿಬಂಧಕರು, ವಿಚಾರಣೆಗಳು-8, ಇವರು ಮೇಲೆ ಓದಲಾದ ದಿನಾಂಕ:26.11.2012ರ ಪತ್ರದಲ್ಲಿ ತಿಳಿಸಿರುತ್ತಾರೆ:-

1) ಶ್ರೀ ಎಂ.ಮಲ್ಲೇಶಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಚಿತ್ರದುರ್ಗ,
2) ಶ್ರೀ ಹೆಚ್. ಶ್ರೀನಿವಾಸ್, ಕಾರ್ಯದರ್ಶಿ, ಗ್ರಾಮ ಪಂಚಾಯತಿ, ಇಂಗಳದಾಳ, ಚಿತ್ರದುರ್ಗ ತಾಲ್ಲೂಕು

ಉಪ ಲೋಕಾಯುಕ್ತ ರವರ ವರದಿ ಮತ್ತು ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಲಾಗಿ, ಮೇಲ್ಕಂಡ ಅಧಿಕಾರಿ /ನೌಕರರುಗಳ ವಿರುದ್ಧದ ಆರೋಪಗಳು ಮೇಲ್ನೋಟಕ್ಕೆ ಸಾಬೀತಾಗಿರುವುದರಿಂದ ಅವರುಗಳ ವಿರುದ್ಧದ ಆರೋಪಗಳ ಸತ್ಯಾಸತ್ಯತೆಯನ್ನು ಕಂಡುಹಿಡಿಯಲು

ಜಂಟಿ ಇಲಾಖಾ ವಿಚಾರಣೆ ಜರುಗಿಸಲು ಈ ಪ್ರಕರಣವನ್ನು ಕರ್ನಾಟಕ ಉಪ ಲೋಕಾಯುಕ್ತ ರವರಿಗೆ ವಹಿಸಲು ಸರ್ಕಾರವು ನಿರ್ಧರಿಸಿ ಈ ಮುಂದಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 222 ವಿಸೇಬಿ 2012 ಬೆಂಗಳೂರು ದಿನಾಂಕ: 15-01-2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂಥ ಈ ಕೆಳಕಂಡ ಅಧಿಕಾರಿ/ನೌಕರರುಗಳ ವಿರುದ್ಧ ಮಾಡಿರುವ ಆರೋಪಗಳ ಬಗ್ಗೆ ಜಂಟಿ ಇಲಾಖಾ ವಿಚಾರಣೆ ಜರುಗಿಸಲು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು-1957ರ ನಿಯಮ-14(ಎ) ರ ಪ್ರಕಾರ ಈ ಪ್ರಕರಣವನ್ನು ಕರ್ನಾಟಕ ಉಪ ಲೋಕಾಯುಕ್ತ ರವರಿಗೆ ವಹಿಸಲಾಗಿದೆ.

1) ಶ್ರೀ ಎಂ.ಮಲ್ಲೇಶಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಚಿತ್ರದುರ್ಗ,
2) ಶ್ರೀ ಹೆಚ್. ಶ್ರೀನಿವಾಸ್, ಕಾರ್ಯದರ್ಶಿ, ಗ್ರಾಮ ಪಂಚಾಯತಿ, ಇಂಗಳದಾಳ, ಚಿತ್ರದುರ್ಗ ತಾಲ್ಲೂಕು

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಬಿ.ರಘುನಾಥ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಉಪಲೋಕಾಯುಕ್ತ, ಕರ್ನಾಟಕ ಲೋಕಾಯುಕ್ತರ ಕಛೇರಿ, ಬೆಂಗಳೂರು.
3. ಅಪರ ನಿಬಂಧಕರು, ವಿಚಾರಣೆಗಳು-8.ಕರ್ನಾಟಕ ಲೋಕಾಯುಕ್ತರ ಕಛೇರಿ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿತ್ರದುರ್ಗ.
5. ಸಂಬಂಧಪಟ್ಟ ಅಧಿಕಾರಿಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿತ್ರದುರ್ಗ ರವರ ಮುಖಾಂತರ).
6. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ(ಪಂ.ರಾಜ್)/ಅಪರ ಕಾರ್ಯದರ್ಶಿ (ಆಡಳಿತ), ಗ್ರಾ.ಅ. & ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
7. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.